# ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯ, ಚಿಕ್ಕಬಳ್ಳಾಪುರ

## Spl. CASE: 99/2023

**ಪ್ರಾ.ಸಾ. 5**
**ದೋ.ಸಾ. 11**

| | | |
|---|---|---|
| ಸಾಕ್ಷಿಯ ಹೆಸರು | : | ಚಂದ್ರಪ್ಪ |
| ತಂದೆಯ ಹೆಸರು | : | ಮುನಿಯಪ್ಪ |
| ವಯಸ್ಸು | : | 56 ವರ್ಷ |
| ಉದ್ಯೋಗ | : | ಎ ಎಸ್ ಐ , ಕೆಂಚಾರ್ಲಹಳ್ಳಿ ಪೋಲೀಸ್ ಠಾಣೆ. |
| ವಾಸ | : | ಚಿಂತಾಮಣಿ |

**ದಿನಾಂಕ 10-03-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯವಿಚಾರಣೆಃ ಸರ್ಕಾರಿ ಅಭಿಯೋಜಕರಿಂದಃ**

1). ನಾನು ಕಳೆದ ನಾಲ್ಕು ವರ್ಷಗಳಿಂದ ಎ ಎಸ್ ಐ ಆಗಿ ಕೆಂಚಾರ್ಲಹಳ್ಳಿ ಪಿ ಎಸ್ ನಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

2. ದಿಃ 16-08-2023 ರಂದು ಮಃ 01-30 ಗಂಟೆ ಸಮಯದಲ್ಲಿ ನಾನು ಠಾಣಾ ಕರ್ತವ್ಯದಲ್ಲಿದ್ದಾಗ ಚಾಸಾ-6 ಪಿಸಿ-ಅಖಿಲೇಶ್ ರವರು ಠಾಣೆಗೆ ಹಾಜರಾಗಿ ಒಂದು ವರದಿಯನ್ನು ಹಾಜರುಪಡಿಸಿದ ಮೇರೆಗೆ ಅದನ್ನು ಸ್ವೀಕರಿಸಿ ಠಾಣಾ ಮೊಕ್ಕದ್ದಮ್ಮೆ ಸಂಖ್ಯೆ 102/2023 ರಂತೆ ಪ್ರಕರಣವನ್ನು ದಾಖಲು ಮಾಡಿ ಪ್ರ.ವ ವರದಿಯನ್ನು ಘನ ನ್ಯಾಯಾಲಯಕ್ಕೆ ಹಾಗೂ ನಮ್ಮ ಮೇಲಾಧಿಕಾರಿಗಳಿಗೆ ಸಲ್ಲಿಸಿಕೊಂಡಿರುತ್ತೇನೆ. ಸಾಕ್ಷಿ

ವರದಿಯನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ–6 ಎಂದು ಗುರುತಿಸಲಾಗಿದ್ದು, ಹಿಂಬರಹ ಹಾಗೂ ಸಾಕ್ಷಿ ಸಹಿಯನ್ನು **ನಿಪಿ–6 (ಬಿ)** ಎಂದು ಗುರುತಿಸಲಾಯಿತು. ಸಾಕ್ಷಿ ಪ್ರ.ವ ವರದಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ–**12 ಎಂದು**, ಹಿಂಬರಹ ಹಾಗೂ ಸಾಕ್ಷಿ ಸಹಿಯನ್ನು **ನಿಪಿ–**12 (ಎ) ಎಂದು ಗುರುತಿಸಲಾಯಿತು. ಕಡತವನ್ನು ಮುಂದಿನ ತನಿಖೆಗಾಗಿ ಫ್ರಾಸಾ–4 ರವರಿಗೆ ವಹಿಸಿಕೊಟ್ಟಿರುತ್ತೇನೆ.

**ಪಾಟೀಸವಾಲುಃ ಆರೋಪಿ ಪರ ವಕೀಲರಾದ ಶ್ರೀ ಕೆ ಎಮ್ ಎನ್ ರವರಿಂದ**

3. ಪ್ರ.ವ.ವರದಿಯನ್ನು ಮಃ 02–00 ಗಂಟೆಗೆ ನ್ಯಾಯಾಲಯಕ್ಕೆ ಕಳುಹಿಸಿಕೊಟ್ಟಿರುತ್ತೇನೆ. ನಿಪಿ–6 ರ ಹಿಂಬರಹದಲ್ಲಿ ದಿನಾಂಕ 06–08–2023 ಎಂದು ನಮೂದಿಸಲಾಗಿದೆ ಎಂದರೆ ಸಾಕ್ಷಿಯು ದಾಖಲೆಯನ್ನು ಪರಿಶೀಲಿಸಿ ಕೈತಪ್ಪಿ ನಿಂದ ಬರೆದಿರುವುದಾಗಿ ನುಡಿಯುತ್ತಾರೆ. ನನ್ನ ಹಿಂಬರಹದ ನಂತರ ದೂರನ್ನು ಬೆರಳಚ್ಚು ಮಾಡಲಾಗಿದೆ ಎಂದರೆ ಸರಿಯಲ್ಲ. ಮೇಲಾಧಿಕಾರಿಗಳ ಮಾತು ಕೇಳಿ ಆರೋಪಿ ವಿರುದ್ಧ ಸುಳ್ಳು ಪ್ರಕರಣ ದಾಖಲು ಮಾಡಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ** ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಸಾಕ್ಷಿಯ ಹೇಳಿಕೆಯನ್ನು ಗಣಕ ಯಂತ್ರದ ಮೂಲಕ ಬೆರಳಚ್ಚು ಮಾಡಿಸಲಾಗಿದೆ.)

ಓ.ಹೇ.ಕೇ.ಸ.ಇ.
Sd/-
**(ಟಿ. ಪಿ. ರಾಮಲಿಂಗೆ ಗೌಡ)**
**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,**
**ಚಿಕ್ಕಬಳ್ಳಾಪುರ.**